# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 1 ರಿಂದ 8 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಆದಾಯ ಮಿತಿಯನ್ನು ಪರಿಷ್ಕರಿಸುವ ಬಗ್ಗೆ

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಸಕಇ 122 ಸಮನ್ವಯ 2011. ದಿನಾಂಕ: 07-07-2011.

| ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು | | |
|---|---|---|
| ಕ್ರ. ಸಂ : | | |
| ದಿನಾಂಕ : | | |
| ಉ.ನಿ<br>ಶಾಖೆ: | ಜ.ನಿ<br>ಶಾಖೆ: | ಅ.ನಿ<br>ಶಾಖೆ: |

2. ಸರ್ಕಾರದ ಆದೇಶ ಸಂಖ್ಯೆ: ಸಕಇ 195 ಪಕವಿ 2015. ದಿನಾಂಕ: 18-08-2015.

3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಇವರ ಏಕ ಕಡತ ಸಂಖ್ಯೆ: ಸಕನಿ /ಇಡಿ-03/ಸಿಆರ್-01/2017-18, ದಿನಾಂಕ: 11-04-2017.

********

**ಪ್ರಸ್ತಾವನೆ:**

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಸರ್ಕಾರದ ಆದೇಶ ದಿನಾಂಕ: 07-07-2011 ರಲ್ಲಿ 2011-12 ನೇ ಸಾಲಿನ ಆಯವ್ಯ ಭಾಷಣದ ಕಂಡಿಕೆ 116 ರಂತೆ ವಿದ್ಯಾರ್ಥಿ ನಿಲಯಗಳಲ್ಲಿ ವಾಸಿಸದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ 1 ರಿಂದ 7 ನೇ ತರಗತಿವರೆಗಿನ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ನೀಡುವ ವಾರ್ಷಿಕ ವಿದ್ಯಾರ್ಥಿ ವೇತನವನ್ನು ರೂ.75/- ಗಳಿಂದ ರೂ.250/- ಗಳಿಗೆ ಹಾಗೂ 8 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ ರೂ.100/- ಗಳಿಂದ ರೂ.500/- ಗಳಿಗೆ ಹೆಚ್ಚಿಸಿ, ವಿದ್ಯಾರ್ಥಿ ವೇತನ ಪಡೆಯಲು ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ.2.00 ಲಕ್ಷಗಳಿಗೆ ನಿಗದಿಪಡಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ಸರ್ಕಾರದ ಆದೇಶ ದಿನಾಂಕ: 18-08-2015 ರಲ್ಲಿ ವಿದ್ಯಾರ್ಥಿ ವೇತನವನ್ನು ಈ ಕೆಳಗಿನಂತೆ ಹೆಚ್ಚಿಸಿ, ವಿದ್ಯಾರ್ಥಿ ವೇತನ ಪಡೆಯಲು ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ.2.00 ಲಕ್ಷಗಳಿಗೆ ನಿಗದಿಪಡಿಸಿ ಆದೇಶ ಹೊರಡಿಸಲಾಗಿದೆ.

| ಕ್ರಮ ಸಂಖ್ಯೆ | ತರಗತಿ | ಬಾಲಕರು | ಬಾಲಕಿಯರು |
|---|---|---|---|
| 01 | 1 ರಿಂದ 5 ನೇ ತರಗತಿ | ರೂ.750/- | ರೂ.850/- |
| 02 | 6 ರಿಂದ 7 ನೇ ತರಗತಿ | ರೂ.900/- | ರೂ.1000/- |
| 03 | 8 ನೇ ತರಗತಿ | ರೂ.1000/- | ರೂ.1100/- |

ಮೇಲೆ ಕ್ರಮಾಂಕ (3) ರಲ್ಲಿ ಓದಲಾದ ದಿನಾಂಕ: 11-04-2017 ರ ಏಕ ಕಡತದಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕಾಗಿ ಅನುದಾನವನ್ನು ನೇರವಾಗಿ ಜಿಲ್ಲಾ /ತಾಲ್ಲೂಕು ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲಾಗುತ್ತಿದೆ. ವಿದ್ಯಾರ್ಥಿಗಳು ಪ್ರತಿ ಸಾಲಿನಲ್ಲಿ ಶಾಲಾ ಕಾಲೇಜುಗಳು ತೆರೆದ ಮೇಲೆ ಜೂನ್ ಮಾಹೆಯಲ್ಲಿ ಆನ್‌ಲೈನ್ ಮೂಲಕ ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ಅರ್ಜಿ ಸಲ್ಲಿಸುತ್ತಾರೆ. ಈ ಅರ್ಜಿಗಳನ್ನು ತಾಲ್ಲೂಕು ಸಹಾಯಕ ನಿರ್ದೇಶಕರುಗಳು ಪರಿಶೀಲಿಸಿ, ಅರ್ಹ ಅಭ್ಯರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ವಿದ್ಯಾರ್ಥಿ ವೇತನವನ್ನು RTGS ಮೂಲಕ ಪಾವತಿಸುತ್ತಾರೆ. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ಯೋಜನೆ ರಾಜ್ಯ ಸರ್ಕಾರದ್ದಾಗಿರುತ್ತದೆ. ಹೀಗಾಗಿ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿ ವೇತನ ಆದಾಯ ಮಿತಿಯನ್ನು ರಾಜ್ಯ ಸರ್ಕಾರದ ವತಿಯಿಂದ ಹೆಚ್ಚಿಸಬಹುದಾಗಿರುತ್ತದೆ. ಪ್ರಸ್ತುತ ವಿದ್ಯಾರ್ಥಿ ವೇತನಕ್ಕಾಗಿ ರೂ.2.00 ಲಕ್ಷಗಳ ಆದಾಯ ಮಿತಿಯನ್ನು ನಿಗದಿಪಡಿಸಲಾಗಿದೆ. ಸದರಿ ಮಿತಿಯನ್ನು ರೂ.6.00 ಲಕ್ಷಗಳಿಗೆ

ಹೆಚ್ಚಿಸಿ ಆದೇಶ ಹೊರಡಿಸಿದಲ್ಲಿ ಮೆಟ್ರಿಕ್ ಪೂರ್ವ (1 ರಿಂದ 8) ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಹೆಚ್ಚಿನ ಪ್ರಯೋಜನ ಪಡೆಯುತ್ತಾರೆ. ಆದ್ದರಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ಹಾಲಿ ಇರುವ ಆದಾಯ ಮಿತಿಯನ್ನು ರೂ.2.00 ಲಕ್ಷದಿಂದ ರೂ.6.00 ಲಕ್ಷಗಳಿಗೆ ಪರಿಷ್ಕರಿಸಿ ಆದೇಶ ಹೊರಡಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ವಿದ್ಯಾರ್ಥಿ ವೇತನಕ್ಕಾಗಿ ರೂ.2.00 ಲಕ್ಷಗಳ ಮಿತಿಯನ್ನು ರೂ.6.00 ಲಕ್ಷಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಿದಲ್ಲಿ ಮೆಟ್ರಿಕ್ ಪೂರ್ವ (1 ರಿಂದ 8) ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಹೆಚ್ಚಿನ ಪ್ರಯೋಜನ ಪಡೆಯುವುದರಿಂದ ಆದಾಯ ಮಿತಿಯನ್ನು ಸರ್ಕಾರವು ರೂ.6.00 ಲಕ್ಷಗಳಿಗೆ ಪರಿಷ್ಕರಿಸಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 279 ಪಕವಿ 2017, ಬೆಂಗಳೂರು ದಿನಾಂಕ: 20-04-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆಯಿಂದ ನೀಡುತ್ತಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ (1 ರಿಂದ 8 ತರಗತಿ) ವಿದ್ಯಾರ್ಥಿ ವೇತನ ಪಡೆಯಲು ಕುಟುಂಬದ ವಾರ್ಷಿಕ ಆದಾಯವನ್ನು ರೂ.2.00 ಲಕ್ಷಗಳಿಂದ ರೂ.6.00 ಲಕ್ಷ (ರೂಪಾಯಿ ಆರು ಲಕ್ಷಗಳಿಗೆ ಮಾತ್ರ) ಗಳಿಗೆ ಪರಿಷ್ಕರಿಸಿ ಆದೇಶಿಸಿದೆ. ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ: ಸಕಇ 122 ಸಮನ್ವಯ 2011 ದಿನಾಂಕ: 07-07-2011 ರಲ್ಲಿನ ಷರತ್ತುಗಳು ಅನ್ವಯಿಸುತ್ತವೆ.

ಈ ಆದೇಶವು 2017-18 ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಚಾಲ್ತಿಯಲ್ಲಿರುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2017, ದಿನಾಂಕ: 05-04-2017 ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

20/4/2017
(ಗಿರಿಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಸಹಾಯಕರು.
4. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕೊಠಡಿ ಸಂಖ್ಯೆ:206, 2 ನೇ ಮಹಡಿ, ವಿಧಾನಸೌಧ.

*****